ಶ್ರೀ ಕೆ.ಹೆಚ್. ಪಾಟೀಲ್. (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು).

ಅ) ಧಾರವಾಡ ಜಿಲ್ಲಾ ಪರಿಷತ್ ಈ ಬಗ್ಗೆ ಯಾವುದೇ ಶಿಫಾರಸ್ಸನ್ನು ಮಾಡಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಹೆಚ್ಚುವರಿ 18 ತಾಲ್ಲೂಕುಗಳನ್ನು (ಕಲಘಟಗಿ ತಾಲ್ಲೂಕು ಸೇರಿ) ಪಶ್ಚಿಮ ಘಟ್ಟ ಅಭಿವೃದ್ಧಿ ಯೋಜನೆಗೆ ಸೇರಿಸುವ ಪ್ರಸ್ತಾಪವನ್ನು ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ಯೋಜನಾ ಆಯೋಗಕ್ಕೆ ಕಳುಹಿಸಿದೆ.

**ಬೇತಮಂಗಲವನ್ನು ಪ್ರವಾಸಿ ಸ್ಥಳವೆಂದು ಘೋಷಣೆ.**

1903-ಶ್ರೀ ಎಂ. ನಾರಾಯಣಸ್ವಾಮಿ (ಬೇತಮಂಗಲ) : ಮಾನ್ಯ ವಾರ್ತಾ ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

*ಅ) ಕೋಲಾರ ಜಿಲ್ಲೆಯ ಬೇತಮಂಗಲ ಮತ್ತು ಗುಟ್ಟಹಳ್ಳಿ (ಬಂಗಾರು ತಿರುಪತಿ) ಪ್ರೇಕ್ಷಣೀಯ ಸ್ಥಳಗಳಾಗಿವೆ ಎಂಬುದು ನಿಜವೆ?*

*ಆ) ಬೇತಮಂಗಲವನ್ನು ಪ್ರವಾಸಿ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲು ಸರ್ಕಾರ ಯಾವುದಾವರೂ ಕ್ರಮ ಕೈಗೊಂಡಿದೆಯೆ?*

*ಇ) ಹಾಗಿಲ್ಲದ ಪಕ್ಷದಲ್ಲಿ ಬೇತಮಂಗಲವನ್ನು ಪ್ರೇಕ್ಷಣೀಯ ಸ್ಥಳವೆಂದು ಘೋಷಿಸಲು ಪ್ರಸ್ತುತ ವರ್ಷದಲ್ಲಿ ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ?*

ಶ್ರೀ ಕೆ. ಶಿವಮೂರ್ತಿ (ವಾರ್ತಾ ಪ್ರವಾಸೋದ್ಯಮ ಸಚಿವರು)

ಅ) ಹೌದು.

ಆ) ಇಲ್ಲ.

ಇ) ಬೇತಮಂಗಲವನ್ನು ಈಗಾಗಲೇ ಗುರುತಿಸಿರುವ ಪ್ರವಾಸಿ ಸ್ಥಳಗಳ ಪಟ್ಟಿಯಲ್ಲಿ ಸೇರಿಸಲಾಗುವುದು.

## ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು.

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮಂತ್ರಿಗಳು) :ಸನ್ಮಾನ್ಯ ಅಧ್ಯಕ್ಷರೆ, 15ನೇ ಪಟ್ಟಿಯಲ್ಲಿರುವ ಚುಕ್ಕೆ ಗುರುತಿಲ್ಲದ 21 ಪ್ರಶ್ನೆಗಳ ಪೈಕಿ 20 ಪ್ರಶ್ನೆಗಳನ್ನು ಸಭೆಯ ಮುಂದಿಡುತ್ತಿದ್ದೇನೆ.

**ಮಾಗಡಿ ರೋಡ್ ಪೋಲೀಸ್ ವಸತಿಗಳಿಗೆ ನೀರು ಸರಬರಾಜು.**

1815ಎ - ಕೆ.ಲಕ್ಷ್ಣಣ (ರಾಜಾಜಿನಗರ) : ಮಾನ್ಯ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:

*ಅ) ಮಾಗಡಿ ರೋಡ್ ಮತ್ತು ಜಾರಕ ಬಂಡೆ ಕಾವಲ್ ಪೋಲೀಸ್ ಕ್ವಾರ್ಟರ್ಸ್ ಗಳಲ್ಲಿ ನೀರಿನ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?*

*ಆ) ಬಂದಿದ್ದಲ್ಲಿ, ಆ ಸಮಸ್ಯೆಯನ್ನು ನಿವಾರಿಸಲು ತೆಗೆದುಕೊಂಡ ಕ್ರಮ ಏನು?*

ಶ್ರೀ ಜಿ.ಹೆಚ್. ಅಶ್ವತ್ಥರೆಡ್ಡಿ (ಲೋಕೋಪಯೋಗಿ ಮಂತ್ರಿಗಳು)

ಅ) ಇದೆ